# ಕನ್ನಡಿಗರಾಗಿ ಬಾಳಿ, ಕನ್ನಡತನ ಬೆಳೆಸಿ: ಸಿಎಂ

## ಯಾರು ಬೇಕಾದ್ರೂ ರಾಜಧಾನಿಗೆ ಬರಲಿ. ಆದರೆ ಕನ್ನಡ ಕಲಿಯಬೇಕು | ಬೆಂಗಳೂರು ಹಬ್ಬ 2026 ಉದ್ಘಾಟನೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಯಾವ ರಾಜ್ಯದಿಂದ ಬೇಕಾದರೂ ಬೆಂಗಳೂರಿಗೆ ಜನರು ಬರಲಿ, ವಾಸವಿರಲಿ. ಅದಕ್ಕೆ ನಮ್ಮ ವಿರೋಧವಿಲ್ಲ. ಆದರೆ, ಕನ್ನಡ ಕಲಿತು ಕನ್ನಡಿಗರಾಗಿ ಬಾಳಬೇಕು. ಇಲ್ಲಿ ಕನ್ನಡತನ ಬೆಳೆಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೈಗಾರಿಕಾ ವಲಯಗಳು ಹಾಗೂ ಅನ್‌ಬಾಕ್ಸಿಂಗ್ ಬಿಎಲ್‌ಆರ್ (ಬೆಂಗಳೂರು) ಹಾಗೂ ವಿವಿಧ ಖಾಸಗಿ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿರುವ 10 ದಿನಗಳ 'ಬೆಂಗಳೂರು ಹಬ್ಬ-2026' ಅನ್ನು ಶುಕ್ರವಾರ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ರಾಜ್ಯ ಭಾಷೆಯಾಗಿದೆ. ಎಲ್ಲರೂ ಕನ್ನಡ ಕಲಿಯಬೇಕು. ವ್ಯವಹಾರ ಭಾಷೆಯಾಗಿ ಬಳಸಲೇಬೇಕು. ಇಲ್ಲಿ ಕನ್ನಡದ ವಾತಾವರಣ ಅತ್ಯಂತ ಅವಶ್ಯ ಮತ್ತು ಅನಿವಾರ್ಯ ಎಂದರು.

ಬೆಂಗಳೂರು ಹಬ್ಬವು ನಗರದ 30ಕ್ಕೂ ಹೆಚ್ಚು ಕಡೆ ನಡೆಯುತ್ತದೆ. 250ಕ್ಕೂ ಹೆಚ್ಚು ಕಾರ್ಯಕ್ರಮಗಳು ನಡೆಯುತ್ತವೆ. ಈ ಹಬ್ಬದ ಮೂಲಕ ನಮ್ಮ ಸಂಸ್ಕೃತಿ, ಪರಂಪರೆಯನ್ನು ಅನ್ಯ ರಾಜ್ಯದವರಿಗೆ ಹಾಗೂ ಯುವ ಜನತೆಗೆ ತಲುಪಿಸುವ ಉದ್ದೇಶವಿದೆ. ಎಲ್ಲರೂ ಒಂದು ಎನ್ನುವ ಭಾವನೆ ಮೂಡಿಸುತ್ತದೆ ಎಂದು ಮುಖ್ಯಮಂತ್ರಿ ಹೇಳಿದರು.

ಎಲ್ಲಾ ಊರುಗಳಲ್ಲಿ ಹಬ್ಬ ಮಾಡುತ್ತೇವೆ. ಎಲ್ಲರೂ ಸಂತೋಷ ಪಡಲಿ ಎನ್ನುವುದು ಉದ್ದೇಶ. ಜಾತಿ, ಧರ್ಮ ಮರೆತು, ಮನುಷ್ಯರಾಗಿರುವುದು ಬಹಳಮುಖ್ಯ. ನಾವು ಮನುಷ್ಯರನ್ನು ಪ್ರೀತಿಸಬೇಕು. ಯಾವುದೇ ಧರ್ಮ ಜನರನ್ನು ದ್ವೇಷಿಸಿ ಎನ್ನುವುದಿಲ್ಲ. ಪ್ರೀತಿಸಿ ಎನ್ನುತ್ತದೆ. ನಾಡಿನಲ್ಲಿ ಜನಿಸಿದ ಮಹನೀಯರು ಕೂಡ ಭಾವೈಕ್ಯತೆಯಿಂದ ಬದುಕಬೇಕು ಎನ್ನುವ ಸಂದೇಶ ನೀಡಿದರು ಎಂದು ಮುಖ್ಯಮಂತ್ರಿ ತಿಳಿಸಿದರು.

ಹುಟ್ಟು ಸಾವಿನ ನಡುವೆ ಏನು ಮಾಡುತ್ತೇವೆ? ಏನು ಸಾಧಿಸಿದೆವು? ಸಮಾಜಕ್ಕೆ ಏನು ಕೊಟ್ಟೆವು? ಎನ್ನುವುದು ಮುಖ್ಯ. ಬೇರೆಯವರು ನಮ್ಮನ್ನು ಅನುಸರಿಸುವಂತಿರಬೇಕು. ಕಲೆ, ಸಾಹಿತ್ಯ, ಸಂಸ್ಕೃತಿ ಮರೆಯಬಾರದು ಎಂದು ಹೇಳಿದರು.

**ಮಣ್ಣಿನ ಸಂಸ್ಕೃತಿ ಮಾಯ:** ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಮುಂಬರುವ ದಿನಗಳಲ್ಲಿ ಬೆಂಗಳೂರಲ್ಲಿ ಹಬ್ಬಗಳೇ ಇರುವುದಿಲ್ಲ ಎನ್ನುವ ವಾತಾವರಣ ನಿರ್ಮಾಣವಾಗುತ್ತಿದೆ. ಈ ಮೂಲಕ ಈ ನಾಡಿನ, ಮಣ್ಣಿನ ಸಂಸ್ಕೃತಿಯು ಮರೆಯಾಗುತ್ತಿದೆ. ಕನ್ನಡಿಗರಿಗಿಂತ ಅನ್ಯ ರಾಜ್ಯದವರೇ ಹೆಚ್ಚು ಇದ್ದಾರೆ. ಪಂಚಮಿ ಹಬ್ಬಕ್ಕೆ ಹಗ್ಗ ಕಟ್ಟಿ ಜೋಕಾಲಿ ಆಡುತ್ತಿದ್ದರು. ಈಗಿನ ಮಕ್ಕಳಿಗೆ ಅದನ್ನು ಜಾಲತಾಣದಲ್ಲಿ ನೋಡಿ ತಿಳಿಯುವಂತಹ ಪರಿಸ್ಥಿತಿ ಇದೆ ಎಂದರು.

ನಟ ಶಿವರಾಜ್ ಕುಮಾರ್ ಮಾತನಾಡಿ, ಸಂಭ್ರಮದಿಂದ ಬೆಂಗಳೂರು ಹಬ್ಬಕ್ಕೆ ಚಾಲನೆ ನೀಡುತ್ತಿರುವುದು ಖುಷಿ ತಂದಿದೆ. ಬೆಂಗಳೂರು ಹಬ್ಬ ಯಶಸ್ವಿಯಾಗಲಿ ಎಂದರು. ಸಿಎಂ ರಾಜಕೀಯ ಕಾರ್ಯದರ್ಶಿ ನಸೀರ್‌ಅಹಮದ್, ವಿಧಾನಸಭೆ ಮುಖ್ಯ ಸಚೇತಕ ಅಶೋಕ್ ಪಟ್ಟಣ್, ನಟಿ ಜಯಮಾಲಾ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಉಪಸ್ಥಿತರಿದ್ದರು.



ಡೊಳ್ಳು ಬಾರಿಸುವ ಮೂಲಕ ಬೆಂಗಳೂರು ಹಬ್ಬ 2026ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸದಸ್ಯ ಗೋವಿಂದರಾಜು, ನಟ ಶಿವರಾಜಕುಮಾರ್, ನಟಿ ಜಯಮಾಲಾ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು.

## ಜಾನಪದ ಕಲಾತಂಡಗಳಿಂದ ಮೆರವಣಿಗೆ



ತಾಯಿ ಭುವನೇಶ್ವರಿ, ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡ ಪ್ರತಿಮೆ, ಸಾಹಿತಿಗಳು, ಚಿತ್ರನಟರ ಭಾವಚಿತ್ರ ಗಳೊಂದಿಗೆ ಹೂವಿನಿಂದ ಅಲಂಕೃತ ವಾಹನದಲ್ಲಿ ಮೆರವಣಿಗೆ ನಡೆಯಿತು. ಯಕ್ಷಗಾನ, ಭರತನಾಟ್ಯ, ಡೊಳ್ಳು ಕುಣಿತ, ಹುಲಿ ವೇಷಧಾರಿಗಳು, ಪೂಜಾ ಕುಣಿತ, ವೀರಗಾಸೆ ಸೇರಿದಂತೆ ಜಾನಪದ ಕಲಾತಂಡಗಳು ರಾಜಧಾನಿಯ ಹೃದಯ ಭಾಗದ ರಸ್ತೆಗಳಲ್ಲಿ ಮೆರವಣಿಗೆಯಲ್ಲಿ ಸಾಗಿದವು. ಮೆರವಣಿಗೆಯಲ್ಲಿ ನಮ್ಮ ನಾಡಿ, ಕಲೆ,ಸಾಹಿತ್ಯ, ಸ್ತಬ್ಧಚಿತ್ರಗಳು, ಸಂಸ್ಕೃತಿಯ ಭವ್ಯ ಪರಂಪರೆ ಅನಾವರಣಗೊಂಡಿತು. ಮಹಿಳೆಯ ಪೂರ್ಣಕುಂಭ, ಸಾಂಪ್ರದಾಯಿಕ ಉಡುಗೆ ತೊಟ್ಟು ವಿದ್ಯಾರ್ಥಿ-ವಿದ್ಯಾರ್ಥಿನಿಯರು ಮೆರವಣಿಗೆಯ ಮೆರಗು ಹೆಚ್ಚಿಸಿದರು.

## ಹತ್ತು ದಿನಗಳ ಬೆಂಗಳೂರು ಹಬ್ಬ



ರಾಜ್ಯ ರಾಜಧಾನಿ ಬೆಂಗಳೂರಿನ ಸಾಂಸ್ಕೃತಿಕ, ಕಲೆ, ನಾಗರಿಕತೆ ಹಾಗೂ ನಾವೀನ್ಯತೆ ಕ್ಷೇತ್ರಗಳ ಮೇಲೆ ಬೆಳಕು ಚೆಲ್ಲಲು ರಾಜ್ಯ ಸರ್ಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೈಗಾರಿಕಾ ವಲಯಗಳು ಹಾಗೂ ಅನ್‌ಬಾಕ್ಸಿಂಗ್ ಬಿಎಲ್‌ಆರ್(ಬೆಂಗಳೂರು) ಸೇರಿದಂತೆ ವಿವಿಧ ಖಾಸಗಿ ಸಂಸ್ಥೆಗಳು ಸೇರಿ ಹಮ್ಮಿಕೊಂಡಿರುವ ಮೂರನೇ ಆವೃತ್ತಿಯ 'ಬೆಂಗಳೂರು ಹಬ್ಬ-2026' ಜನವರಿ 25ರವರೆಗೆ ಹಮ್ಮಿಕೊಂಡಿದೆ. ಫ್ರೀಡಂ ಪಾರ್ಕ್, ಬೆಂಗಳೂರು ಇಂಟರ್‌ನ್ಯಾಷನಲ್ ಸೆಂಟರ್, ಸಭಾ, ಪ್ರೆಸ್ಟೀಜ್ ಫಾರ್ ಪರ್ಫಾರ್ಮಿಂಗ್ ಆರ್ಟ್ಸ್, ನ್ಯಾಷನಲ್ ಗ್ಯಾಲರಿ ಆಫ್ ಮಾಡರ್ನ್ ಆರ್ಟ್, ಪಂಚವಟಿ, ಅಲೈಯನ್ಸ್ ಫ್ರಾಂಚೈಸ್, ಯುವಕ ಸಂಘ, ಎಡಿಎ ರಂಗ ಮಂದಿರ, ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್, ರವೀಂದ್ರ ಕಲಾಕ್ಷೇತ್ರ, ಇಂಡಿಯನ್ ಹೆರಿಟೇಜ್ ಅಕಾಡೆಮಿ ಸೇರಿ ವಿವಿಧೆಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.









ಬೆಂಗಳೂರು ಹಬ್ಬಕ್ಕೆ ಸಿಎಂ ಚಾಲನೆ | 25ರವರೆಗೆ ನಗರದಲ್ಲಿ ಸಾಂಸ್ಕೃತಿಕ ಉತ್ಸವ | 30ಕ್ಕೂ ಹೆಚ್ಚು ಪ್ರದೇಶಗಳಲ್ಲಿ 350ಕ್ಕೂ ಹೆಚ್ಚು ಕಾರ್ಯಕ್ರಮಗಳ ಅನಾವರಣ

# ಅನ್ಯ ಭಾಷಿಕರಿಗೆ ಕನ್ನಡ ವ್ಯಾವಹಾರಿಕ ಭಾಷೆಯಾಗಲಿ

■ ವಿಕ ಸುದ್ದಿಲೋಕ ಬೆಂಗಳೂರು

"ಬೆಂಗಳೂರಿಗೆ ಯಾವ ಭಾಗದಿಂದಲಾದರೂ ಜನ ಬರಲಿ, ಅದಕ್ಕೆ ನಮ್ಮ ವಿರೋಧವಿಲ್ಲ. ಆದರೆ, ಕನ್ನಡ ಕಲಿತು ಕನ್ನಡಿಗರಾಗಿ ಬಾಳಬೇಕು. ಹಾಗೆಯೇ ಕನ್ನಡವನ್ನು ವ್ಯಾವಹಾರಿಕ ಭಾಷೆಯನ್ನಾಗಿಸಬೇಕು. ಅಂತಹ ಕನ್ನಡದ ವಾತಾವರಣ ನಿರ್ಮಾಣ ಮಾಡುವುದು ಕನ್ನಡಿಗರ ಜವಾಬ್ದಾರಿ," ಎಂದು ಸಿಎಂ ಸಿದ್ದರಾಮಯ್ಯ ಕರೆ ನೀಡಿದರು.

ರಾಜ್ಯ ಸರಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೈಗಾರಿಕೆ ವಲಯ ಹಾಗೂ ವಿವಿಧ ಖಾಸಗಿ ಸಂಘ ಸಂಸ್ಥೆಗಳ ಸಹಭಾಗಿತ್ವದಲ್ಲಿ ಜ.25ರವರೆಗೆ ಹತ್ತು ದಿನಗಳ ಕಾಲ ಆಯೋಜಿಸಿರುವ 'ಬೆಂಗಳೂರು ಹಬ್ಬ'ಕ್ಕೆ ಶುಕ್ರವಾರ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಚಾಲನೆ ನೀಡಿ ಅವರು ಮಾತನಾಡಿದರು.

"ಬೆಂಗಳೂರು ಹಬ್ಬದಲ್ಲಿ 30ಕ್ಕೂ ಹೆಚ್ಚು ಪ್ರದೇಶಗಳಲ್ಲಿ 350ಕ್ಕೂ ಹೆಚ್ಚು ಕಾರ್ಯಕ್ರಮಗಳು ನಡೆಯಲಿದ್ದು, ಬೆಂಗಳೂರಿನ ನಾಗರಿಕರಿಗೆ ಇದೊಂದು ಸುಸಂದರ್ಭ. ಸಾಹಿತ್ಯ, ಕಲೆ, ಸಂಸ್ಕೃತಿಗಳನ್ನು ಬೇರೆ ರಾಜ್ಯದಿಂದ ಬಂದು ಬೆಂಗಳೂರಿನಲ್ಲಿ ನೆಲೆಸಿರುವವರಿಗೆ ಮತ್ತು ಯುವ ಜನಾಂಗಕ್ಕೆ ತಲುಪಿಸುವುದು ಇದರ ಉದ್ದೇಶ. ಜಾತ್ರೆ, ಉತ್ಸವಗಳು, ಜಾತಿ- ಧರ್ಮಗಳನ್ನು ಮರೆತು ಮನುಷ್ಯರಾಗಬೇಕು ಎನ್ನುವ ಸಂದೇಶ ನೀಡುತ್ತವೆ. ಮನುಷ್ಯರು ಪರಸ್ಪರ ಪ್ರೀತಿಸಬೇಕೇ ಹೊರತು ದ್ವೇಷಿಸಬಾರದು. ಯಾವುದೇ ಧರ್ಮ ದ್ವೇಷಿಸಲು ಹೇಳುವುದಿಲ್ಲ,"ಎಂದರು.



'ಬೆಂಗಳೂರು ಹಬ್ಬ'ಕ್ಕೆ ಶುಕ್ರವಾರ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಸಿಎಂ ಚಾಲನೆ ನೀಡಿದರು.

"ನಾಡಿನಲ್ಲಿ ಬಸವಣ್ಣ, ಕನಕದಾಸರು, ನಾರಾಯಣ ಗುರುಗಳೂ ಸೇರಿದಂತೆ ಅನೇಕರು ಬಂದು ಹೋಗಿದ್ದಾರೆ. ಇವರೆಲ್ಲರೂ ನಾವೆಲ್ಲ ಮನುಷ್ಯರೇ ಎಂದು ಸಾರಿ ಸಾರಿ ಹೇಳಿದವರು. ಬಸವಣ್ಣ ಜಾತಿ, ಧರ್ಮ, ವರ್ಗ, ಕಂದಾಚಾರ, ಮೌಢ್ಯಗಳು ತೊಲಗಬೇಕು ಎಂದು ಕರೆ ನೀಡಿದ್ದರು. ಹುಟ್ಟು ಮತ್ತು ಸಾವಿನ ಮಧ್ಯೆ ನಾವೇನು ಮಾಡುತ್ತೇವೆ ಎನ್ನುವುದು ಮುಖ್ಯ. ಏನು ಸಾಧಿಸಿದೆವು, ಸಮಾಜಕ್ಕೆ ಏನು ಬಿಟ್ಟು ಹೋಗಿದ್ದೇವೆ ಎನ್ನುವುದು ಮುಖ್ಯ. ಬೇರೆಯವರು ಅನುಸರಿಸುವ ರೀತಿಯಲ್ಲಿ ನಮ್ಮ ಹೆಜ್ಜೆ ಗುರುತುಗಳು ಇರಬೇಕೇ ಹೊರತು ಅದನ್ನು ವಿರೋಧಿಸುವಂತಿರಬಾರದು," ಎಂದರು.

"ಬೆಂಗಳೂರಿನಲ್ಲಿ 1.40 ಕೋಟಿ ಜನ ನೆಲೆಸಿದ್ದಾರೆ. ನಾವೆಲ್ಲರೂ ಒಂದಾಗಿ ಬಾಳೋಣ, ಮನುಷ್ಯರಾಗೋಣ. ಕನ್ನಡ ನಮ್ಮ ಮಾತೃಭಾಷೆಯಾಗಿದ್ದು, ಕನ್ನಡತನವನ್ನು ಬೆಳೆಸೋಣ. ಬೆಂಗಳೂರು ಹಬ್ಬ ಎಲ್ಲರನ್ನೂ ಒಂದುಗೂಡಿಸಲಿ," ಎಂದು ಆಶಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ,"ಮುಂಬರುವ ದಿನಗಳಲ್ಲಿ ಬೆಂಗಳೂರಲ್ಲಿ ಹಬ್ಬಗಳೇ ಇರುವುದಿಲ್ಲ ಎನ್ನುವ ವಾತಾವರಣ ನಿರ್ಮಾಣವಾಗುತ್ತಿದೆ. ಈ ಮೂಲಕ ನಾಡಿನ, ಮಣ್ಣಿನ ಸಂಸ್ಕೃತಿಯು ಮರೆಯಾಗುತ್ತಿದೆ. ಕನ್ನಡಿಗರಿಗಿಂತ ಅನ್ಯ ರಾಜ್ಯದವರೇ ಹೆಚ್ಚು ಇದ್ದಾರೆ. ಪಂಚಮಿ ಹಬ್ಬಕ್ಕೆ ಹಗ್ಗ ಕಟ್ಟಿ ಜೋಕಾಲಿ ಆಡುತ್ತಿದ್ದರು. ಈಗಿನ ಮಕ್ಕಳಿಗೆ ಅದನ್ನು ಜಾಲತಾಣದಲ್ಲಿ ನೋಡಿ ತಿಳಿಯುವಂತಹ ಪರಿಸ್ಥಿತಿ ಬಂದಿದೆ," ಎಂದು ಬೇಸರ ವ್ಯಕ್ತಪಡಿಸಿದರು.

ನಟ ಶಿವರಾಜ್ ಕುಮಾರ್ ಮಾತನಾಡಿ, "ಅತ್ಯಂತ ಸಡಗರ, ಸಂಭ್ರಮದಿಂದ ಬೆಂಗಳೂರು ಹಬ್ಬಕ್ಕೆ ಚಾಲನೆ ನೀಡುತ್ತಿರುವುದು ಖುಷಿ ತಂದಿದೆ. ಬೆಂಗಳೂರು ಹಬ್ಬ ಯಶಸ್ವಿಯಾಗಲಿ," ಎಂದು ಹಾರೈಸಿದರು.

ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ವಿಧಾನಸಭೆ ಮುಖ್ಯ ಸಚೇತಕ ಅಶೋಕ್ ಪಟ್ಟಣ, ಮಾಜಿ ಸಚಿವೆ ಜಯಮಾಲಾ, ಸರಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಉಪಸ್ಥಿತರಿದ್ದರು.

## ಮೆರವಣಿಗೆ-ಸಾಂಸ್ಕೃತಿಕ ಕಾರ್ಯಕ್ರಮ

ತಾಯಿ ಭುವನೇಶ್ವರಿ, ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡ ಪ್ರತಿಮೆ, ಸಾಹಿತಿಗಳ ಚಿತ್ರಗಳು, ಯಕ್ಷಗಾನ, ಭರತನಾಟ್ಯ, ಡೊಳ್ಳು ಕುಣಿತ, ಹುಲಿ ವೇಷಧಾರಿಗಳು, ಪೂಜಾ ಕುಣಿತ, ವೀರಗಾಸೆ ಸೇರಿದಂತೆ ಜಾನಪದ ಕಲಾತಂಡಗಳು ರಾಜಧಾನಿಯ ಹೃದಯ ಭಾಗದ ರಸ್ತೆಗಳಲ್ಲಿ ಮೆರವಣಿಗೆಯಲ್ಲಿ ಸಾಗಿದವು. ಬಳಿಕ ಅದು ವಿಧಾನಸೌಧ, ಕಬ್ಬನ್ ಪಾರ್ಕ್ ಒಳಭಾಗದಿಂದ ಕೇಂದ್ರ ಗ್ರಂಥಾಲಯ, ಟೆನಿಸ್ ಮೈದಾನ, ವಿಕ್ಟೋರಿಯಾ ಪ್ರತಿಮೆ, ಅನಿಲ್ ಕುಂಬ್ಳೆ ವೃತ್ತ, ಮಹಾತ್ಮ ಗಾಂಧಿ ರಸ್ತೆ ಹಾಗೂ ಎಂಜಿ ರಸ್ತೆ ಮೆಟ್ರೊ ನಿಲ್ದಾಣದ ರಂಗೋಲಿ ಕಲಾ ಕೇಂದ್ರ ತಲುಪಿತು. ಮೆರವಣಿಗೆಯಲ್ಲಿ ನಮ್ಮ ನಾಡಿನ ಕಲೆ, ಸಾಹಿತ್ಯ ಕುರಿತ ಸ್ತಬ್ಧಚಿತ್ರಗಳು ನಮ್ಮ ಭವ್ಯ ಪರಂಪರೆ ಅನಾವರಣಗೊಳಿಸಿದವು. ಪೂರ್ಣಕುಂಭ ಹೊತ್ತ ಮಹಿಳೆಯರು, ಸಾಂಪ್ರದಾಯಿಕ ಉಡುಗೆ ತೊಟ್ಟ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಮೆರವಣಿಗೆಯ ಮೆರುಗು ಹೆಚ್ಚಿಸಿದರು.

## ಹತ್ತು ದಿನಗಳ ಬೆಂಗಳೂರು ಹಬ್ಬ

ರಾಜ್ಯ ರಾಜಧಾನಿ ಬೆಂಗಳೂರಿನ ಸಾಂಸ್ಕೃತಿಕ, ಕಲೆ, ನಾಗರಿಕತೆ ಹಾಗೂ ನಾವೀನ್ಯತೆ ಕ್ಷೇತ್ರಗಳ ಮೇಲೆ ಬೆಳಕು ಚೆಲ್ಲಲು ರಾಜ್ಯ ಸರಕಾರ, ಅನ್‌ಬಾಕ್ಸಿಂಗ್ ಬಿಎಲ್‌ಆರ್ (ಬೆಂಗಳೂರು) ಹಾಗೂ ವಿವಿಧ ಖಾಸಗಿ ಸಂಸ್ಥೆಗಳು ಸೇರಿ ಹಮ್ಮಿಕೊಂಡಿರುವ ಮೂರನೇ ಆವೃತ್ತಿಯ 'ಬೆಂಗಳೂರು ಹಬ್ಬ-2026' ಜನವರಿ 25ರವರೆಗೆ ನಡೆಯಲಿದೆ. ಫ್ರೀಡಂ ಪಾರ್ಕ್, ಬೆಂಗಳೂರು ಇಂಟರ್‌ನ್ಯಾಷನಲ್ ಸೆಂಟರ್, ಪ್ರೆಸ್ಟೀಜ್ ಫಾರ್ ಪರ್ಫಾರ್ಮಿಂಗ್ ಆರ್ಟ್ಸ್, ನ್ಯಾಷನಲ್ ಗ್ಯಾಲರಿ ಆಫ್ ಮಾಡರ್ನ್ ಆರ್ಟ್, ಪಂಚವಟಿ, ಅಲೈಯನ್ಸ್ ಫ್ರಾನ್ಸೆ, ಯುವಕ ಸಂಘ, ಎಡಿಎ ರಂಗ ಮಂದಿರ, ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್, ರವೀಂದ್ರ ಕಲಾಕ್ಷೇತ್ರ, ಇಂಡಿಯನ್ ಹೆರಿಟೇಜ್ ಅಕಾಡೆಮಿ ಸೇರಿದಂತೆ ಸುಮಾರು 30 ಸ್ಥಳಗಳಲ್ಲಿ 350ಕ್ಕೂ ಹೆಚ್ಚು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನಾಡಿನ ಕಲೆ, ಸಾಹಿತ್ಯ, ಸಂಸ್ಕೃತಿಗೆ ಸಂಬಂಧಿಸಿದಂತೆ ವೈವಿಧ್ಯಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನ ಸಾಂಸ್ಕೃತಿಕ ಅನುಭವ ಹಾಗೂ ಇತಿಹಾಸವನ್ನು ಮರು ಶೋಧಿಸುವ ಚಟುವಟಿಕೆಗಳೂ ನಡೆಯಲಿವೆ.